# ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಮುಂಡರಗಿ
## ಸಿ.ಸಿ ನಂಃ 543/2023

| | | |
|---|---|---|
| ಸಾಕ್ಷಿಯ ಹೆಸರುಃ | ಹನುಮಪ್ಪ | ಫ್ರಾಸಾಃ **08** |
| ತಂದೆ/ಗಂಡನ ಹೆಸರುಃ | ನಾಗಪ್ಪ | ಚಾಸಾಃ **09** |
| ವಯಸ್ಸುಃ | **30** ವರ್ಷ | ದಿಃ **23.06.2026** |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಕೇಲೂರು | |

### ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ನನಗೆ ಚಾಸಾಃ8 ರವರ  ಮತ್ತು ಆರೋಪಿತರ ಪರಿಚಯ ಇರುವುದಿಲ್ಲ. ಘಟನೆಯ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ.

(ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋದಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸಹಾಯಕ ಸರಕಾರಿ ಅಭಿಯೋಜಕರು ಭಿನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರ ಗಳನ್ನು ಪರಿಶೀಲಿಸಿದಾಗ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾಗ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು.)

### ಪಾಟೀ ಸವಾಲು ಮಾನ್ಯ ಸ.ಸ.ಅ. ರವರಿಂದಃ

ದಿಃ 07.05.2023 ರಂದು  ಮ. 01.00  ರಿಂದ 01.45 ಗಂಟೆಯವರೆಗೆ ಪೋಲಿಸರು ನನ್ನ ಚಾಸಾ.8 ರವರ ಸಮಕ್ಷಮ  ಅಪಘಾತದಲ್ಲಿ ಭಾಗಿಯಾದ ಕೆ.ಎಸ್.ಆರ್.ಟಿ.ಸಿ ಬಸ್‌ನ  ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಗೆ ಪಂಚನಾಮೆ ಹಾಗೂ ಪೋಟೋಗಳನ್ನು ಅವುಗಳನ್ನು  ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ನಿಪಿ- 8 ಮತ್ತು 13 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-8(ಬಿ) ಎಂದು  ಗುರುತಿಸಲಾಯಿತು. ಆರೋಪಿತನಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು   ಆರೋಪಿತರ ಪರಃ ವಕೀಲರವರಿಂದಃ

ಯಾವುದೇ ಪಾಟೀ ಸವಾಲು ಇರುವುದಿಲ್ಲ.

ಮರುವಿಚಾರಣೆ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಜೆಎಂಎಫ್‌ಸಿ ನ್ಯಾಯಾಧೀಶರು
ಮುಂಡರಗಿ